ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803
ಅಂತರ್ಜಾಲ: www.kptcl.com
ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

Corporate Identity Number (CIN): U40109KA1999SGC025521

**(ಕಂಪನಿಯ ಅಧಿಕೃತ ಕಚೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009)**

**ಸಂಖ್ಯೆ: ಕವಿಪ್ರನಿನಿ/ಬಿ16/9457/2019-20** **ದಿನಾಂಕ:** 16 MAR 2020

## ಸುತ್ತೋಲೆ

ವಿಷಯ: ಕೊರೋನಾ ವೈರಸ್ (ಕೋವಿಡ್-19) ಹರಡುವಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಕೈಗೊಳ್ಳಬೇಕಾದ ಮುಂಜಾಗರೂಕತಾ ಕ್ರಮಗಳ ಬಗ್ಗೆ.

ಉಲ್ಲೇಖ:
1. ಭಾರತ ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿ-13014/1/2020-ವಿಐಜಿ, ದಿನಾಂಕ: 06.03.2020.
2. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಕರ್ನಾಟಕ ಸರ್ಕಾರ ಇವರ ಆದೇಶ ಸಂಖ್ಯೆ: ಡಿಡಿ/ಎಸ್‌ಎಸ್‌ಯು/ಕೋವಿಡ್-19/17/19-20, ದಿನಾಂಕ: 13.03.2020.

*****

ಪ್ರಸ್ತುತ ಜಗತ್ತಿನಾದ್ಯಂತ ಅನೇಕ ನಾಗರೀಕ ದೇಶಗಳು ಕರೋನಾ ವೈರಸ್ (ಕೋವಿಡ್-19) ನಿಂದ ಪೀಡಿತರಾಗಿ ಸಾವು ನೋವುಗಳು ಸಂಭವಿಸುತ್ತಿರುವುದನ್ನು ವರದಿಗಳಲ್ಲಿ ಕಾಣುತ್ತಿದ್ದೇವೆ. ಸಾಂಕ್ರಾಮಿಕ ವೈರಾಣುವಾದ ಕೋವಿಡ್-19 ಭಾರತದಲ್ಲಿಯೂ ಸಹ ಅನೇಕ ರಾಜ್ಯಗಳಲ್ಲಿ ಹರಡಿರುವುದು ವರದಿಯಾಗಿರುತ್ತದೆ. ಇದಲ್ಲದೆ, ಕರ್ನಾಟಕ ರಾಜ್ಯದಲ್ಲಿನ ಕೆಲವು ಜಿಲ್ಲೆಗಳಲ್ಲಿ ಜನರು ಈ ವೈರಾಣುವಿನಿಂದ ಸೋಂಕಿತರಾಗಿರುವುದು ಆರೋಗ್ಯ ಇಲಾಖೆಯ ವರದಿಗಳಿಂದ ದೃಢಪಟ್ಟಿರುತ್ತದೆ.

ಈ ಹಿನ್ನಲೆಯಲ್ಲಿ, ಕವಿಪ್ರನಿನಿಯ ಅಧಿಕಾರಿ/ನೌಕರರ ಆರೋಗ್ಯದ ಹಿತದೃಷ್ಟಿಯಿಂದ ಮುಂಜಾಗರೂಕತೆಯ ಕ್ರಮವಾಗಿ ಮುಂದಿನ ಆದೇಶದವರೆಗೂ ಈ ಕೆಳಕಂಡ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚಿಸಲಾಗಿದೆ:

1. ಕವಿಪ್ರನಿನಿಯ ಎಲ್ಲಾ ಕಚೇರಿಗಳಲ್ಲಿ ಬಯೋಮೆಟ್ರಿಕ್ ಉಪಕರಣದಲ್ಲಿ ಹಾಜರಾತಿಯನ್ನು ಸ್ಥಗಿತಗೊಳಿಸುವುದು. ಸದರಿ ಅವಧಿಯಲ್ಲಿ ಸಂಬಂಧಿಸಿದ ಕಚೇರಿ/ವಿಭಾಗಗಳ ಮುಖ್ಯಸ್ಥರು ತಮ್ಮ ಅಧೀನ ಅಧಿಕಾರಿ/ನೌಕರರ ಹಾಜರಾತಿ ಪುಸ್ತಕವನ್ನು ನಿಯಮಾನುಸಾರ ನಿರ್ವಹಿಸುವುದು ಹಾಗೂ ಕಚೇರಿಗಳಲ್ಲಿ ಹಸ್ತ ನಿರ್ಮಲೀಕಾರಕ (Hand Sanitizer) ಗಳನ್ನು ಮತ್ತು ಶೌಚಾಲಯಗಳಲ್ಲಿ ಸಾಬೂನುಗಳನ್ನು ಇಡಲು ಕಡ್ಡಾಯವಾಗಿ ವ್ಯವಸ್ಥೆ ಮಾಡತಕ್ಕದ್ದು.

2. ಕವಿಪ್ರನಿನಿ ವ್ಯಾಪ್ತಿಯಲ್ಲಿ ಅಧಿಕಾರಿ/ನೌಕರರುಗಳಿಗೆ ಎಲ್ಲಾ ರೀತಿಯ ಕಾರ್ಯಾಗಾರ, ತರಬೇತಿಗಳನ್ನು ಆಯೋಜಿಸುವುದನ್ನು ತಕ್ಷಣದಿಂದಲೇ ಜಾರಿಗೆ ಬರುವಂತೆ ನಿಷೇಧಿಸಲಾಗಿದೆ ಮತ್ತು ಅಧೀನ ಸಿಬ್ಬಂದಿ, ಹೊರಗುತ್ತಿಗೆ ಸಿಬ್ಬಂದಿಗಳಿಗೂ ಸಹ ಕೋವಿಡ್-19 ಹರಡದಂತೆ ತಿಳುವಳಿಕೆ ನೀಡುವುದು ಮತ್ತು ಕಚೇರಿಯ ಆವರಣಗಳಲ್ಲಿ/ಸೂಚನಾ ಫಲಕಗಳಲ್ಲಿ ಪ್ರಕಟಿಸುವುದು.

3. ಯಾವುದೇ ಅಧಿಕಾರಿ/ನೌಕರರುಗಳು ಜ್ವರ, ಕೆಮ್ಮು, ನೆಗಡಿ ಅಥವಾ ಉಸಿರಾಟ ಸಮಸ್ಯೆ ಅಂದರೆ, ಕೋವಿಡ್–19 ವೈರಾಣು ಸೋಂಕಿನಿಂದ ಬಳಲುತ್ತಿದ್ದಾರೆಂದು ಕಂಡುಬಂದಲ್ಲಿ ಸಂಬಂಧಿಸಿದ ಕಚೇರಿಯ ಮುಖ್ಯಸ್ಥರು, ವಲಯ/ವೃತ್ತ/ವಿಭಾಗ/ಸ್ಟೇಷನ್/ಉಪಕೇಂದ್ರಗಳ ಅಧಿಕಾರಿಗಳು ಸಂಬಂಧಿಸಿದ ಅಧಿಕಾರಿ/ನೌಕರರುಗಳನ್ನು ಹತ್ತಿರದ ಜಿಲ್ಲಾಸ್ಪತ್ರೆ ಮತ್ತು ಸಂಬಂಧಿಸಿದ ದೃಢೀಕೃತ ಆರೋಗ್ಯ ಕೇಂದ್ರದಲ್ಲಿ ಪರೀಕ್ಷಿಸಿ ಮತ್ತು ಅವರಿಗೆ ಸೂಕ್ತ ಚಿಕಿತ್ಸೆ ಕೊಡಿಸಲು ಕ್ರಮವನ್ನು ಕೈಗೊಳ್ಳಲು ಆಯಾ ಜಿಲ್ಲಾ ಕೇಂದ್ರದ ಆರೋಗ್ಯ ಅಧಿಕಾರಿಗಳಿಗೆ ವರದಿ ಮಾಡತಕ್ಕದ್ದು ಮತ್ತು ಸೋಂಕಿತ ವ್ಯಕ್ತಿಯಿಂದ ವೈರಾಣು ಹರಡದಂತೆ ತಡೆಯಲು ಮುಂಜಾಗರೂಕತಾ ಕ್ರಮ ಕೈಗೊಳ್ಳುವಂತೆ ಸೂಚಿಸಿದೆ.

4. ಕವಿಪ್ರನಿನಿಗೆ ಎಲ್ಲಾ ಎಸ್ಕಾಂಗಳಿಗೆ ಅನಿಯಮಿತ ವಿದ್ಯುತ್ ಪ್ರಸರಣ ಮಾಡುವ ಜವಾಬ್ದಾರಿ ಇರುತ್ತದೆ. ಹಾಗಾಗಿ ಯಾವುದೇ ಸಂದರ್ಭ/ಪರಿಸ್ಥಿತಿಯಲ್ಲಿ ವಿದ್ಯುತ್ ಪ್ರಸರಣಕ್ಕೆ ಅಡೆತಡೆಯಾಗದಂತೆ ಸಂಬಂಧಿಸಿದ ಸಂಬಂಧಿಸಿದ ವಲಯದ ಮುಖ್ಯ ಇಂಜನಿಯರ್(ವಿ) ರವರುಗಳು ಸೋಂಕಿತ ಅಧಿಕಾರಿಗಳು/ನೌಕರರು ರಜೆಯ ಮೇಲೆ ತೆರಳಿದಾಗ ತಮ್ಮ ಕವಿಪ್ರನಿನಿ ವ್ಯಾಪ್ತಿಯಲ್ಲಿನ ಯಾವುದೇ ವಿಭಾಗದಿಂದ, ಅಂದರೆ ಸಮೀಪವಿರುವ ಸ್ಟೇಷನ್/ಟಿ.ಎಲ್. ಮತ್ತು ಎಸ್.ಎಸ್. ವಿಭಾಗ/ಟಿ.ಎಲ್.ಎಂ ವಿಭಾಗ/ಬೃಹತ್ ಕಾಮಗಾರಿ ವಿಭಾಗ/ಉಗ್ರಾಣ/ಆರ್.ಟಿ. ವಿಭಾಗ ಮತ್ತು ಇತರೆ ಅಧೀನ ಕಚೇರಿಗಳಿಂದ (ಕೇಂದ್ರ ಕಚೇರಿ ಸೇರಿ) ತಮಗೆ ಬೇಕಾದ ನುರಿತ ತರಬೇತಿ ಪಡೆದ ಯಾವುದೇ ಅಧಿಕಾರಿ/ನೌಕರರುಗಳನ್ನು ಸಂಬಂಧಿಸಿದ ಸ್ಟೇಷನ್ ಹಾಗೂ ಟಿ.ಎಲ್.ಎಂ ಗಳ ಕಾರ್ಯನಿರ್ವಹಣೆಗೆ ಯಾವುದೇ ತೊಂದರೆಯಾಗದಂತೆ ಅಗತ್ಯವಿರುವ ಸಿಬ್ಬಂದಿಯನ್ನು ನಿಯೋಜಿಸತಕ್ಕದ್ದು.

5. ಬದಲಿ ಸಿಬ್ಬಂದಿ ವ್ಯವಸ್ಥೆಯು ಹೊರಗುತ್ತಿಗೆ ನೌಕರರಿಗೂ ಅನ್ವಯಿಸುತ್ತದೆ. ಹೊರಗುತ್ತಿಗೆ ನೌಕರರನ್ನು ಪೂರೈಸುವ ಏಜೆನ್ಸಿಗಳಿಂದ ಬದಲಿ ವ್ಯವಸ್ಥೆಯನ್ನು ಮಾಡಲು ಕ್ರಮವಹಿಸುವುದು.

6. ಕಚೇರಿಗಳಲ್ಲಿ ಆದಷ್ಟು ಶುಚಿತ್ವವನ್ನು ಕಾಪಾಡಿಕೊಳ್ಳಲು ಅಧಿಕಾರಿ/ನೌಕರರುಗಳಿಗೆ ಸೂಚನೆಯನ್ನು ನೀಡತಕ್ಕದ್ದು. ನೌಕರರು/ಅಧಿಕಾರಿಗಳು ಗುಂಪು ಗುಂಪಾಗಿ ಕೆಲಸ ಮಾಡುವ ಸ್ಥಳಗಳಲ್ಲಿ ಹಸ್ತ ನಿರ್ಮಲೀಕಾರಕ (Hand Sanitizer) ಗಳನ್ನು ಪೂರೈಸಲು ಕ್ರಮ ಜರುಗಿಸುವುದು ಹಾಗೂ ಅಗತ್ಯ ತಿಳುವಳಿಕೆಯನ್ನು ನೀಡುವುದು.

7. ಎಲ್ಲಾ ಅಧಿಕಾರಿ/ನೌಕರರು ಸದರಿ ವಿಷಯಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರದಿಂದ ಕಾಲಕಾಲಕ್ಕೆ ಹೊರಡಿಸುವ ಆದೇಶ/ಸುತ್ತೋಲೆ/ನಿರ್ದೇಶನಗಳನ್ನು ತಪ್ಪದೇ ಪಾಲಿಸುವುದು.

8. ಹೆಚ್ಚಿನ ಮಾಹಿತಿ/ಸಂದೇಹಗಳೇನಾದರೂ ಇದ್ದಲ್ಲಿ, ತೆಗೆದುಕೊಂಡ ಕ್ರಮಗಳನ್ನು ಕಚೇರಿಯ ಮುಖ್ಯಸ್ಥರು ಈ ಕಚೇರಿಯ ದೂರವಾಣಿ ಸಂಖ್ಯೆ: 080–22211527 ಮತ್ತು ಇ–ಮೇಲ್ ವಿಳಾಸ: agmserviceskptcl@gmail.com ಕ್ಕೆ ಸಲ್ಲಿಸುವುದು.

ಎಲ್ಲಾ ಅಧಿಕಾರಿಗಳು ಮತ್ತು ಸಂಬಂಧಿಸಿದ ಕಚೇರಿಯ ಮುಖ್ಯಸ್ಥರು ಈ ಮೇಲ್ಕಂಡ ಅಂಶಗಳನ್ನು ಕಟ್ಟುನಿಟ್ಟಾಗಿ ಎಲ್ಲಾ ಅಧಿಕಾರಿ/ನೌಕರರುಗಳಿಗೆ ತಿಳಿಸತಕ್ಕದ್ದು.

16/3/2020

"ಮಾನ್ಯ ವ್ಯವಸ್ಥಾಪಕ ನಿರ್ದೇಶಕರು, ಕವಿಪ್ರನಿನಿ ಇವರಿಂದ ಅನುಮೋದಿಸಲ್ಪಟ್ಟಿರುತ್ತದೆ"

ನಿರ್ದೇಶಕರು
(ಆಡಳಿತ ಮತ್ತು ಮಾನವ ಸಂಪನ್ಮೂಲ)

ಗೆ:

1. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ಜೆಸ್ಕಾಂ/ಹೆಸ್ಕಾಂ/ಮೆಸ್ಕಾಂ/ಸೆಸ್ಕ್/ಪಿ.ಸಿ.ಕೆ.ಎಲ್.
2. ಎಲ್ಲಾ ನಿರ್ದೇಶಕರು(ತಾಂತ್ರಿಕ), ಎಸ್ಕಾಂಗಳು.
3. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂಗಳು.
4. ಎಲ್ಲಾ ಮುಖ್ಯ ಇಂಜನಿಯರ್(ವಿ), ಕವಿಪ್ರನಿನಿ/ಎಸ್ಕಾಂಗಳು.

5. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ಪ್ರಸರಣ)/ನಿರ್ದೇಶಕರು (ಹಣಕಾಸು)/ ನಿರ್ದೇಶಕರು (ಆಡಳಿತ ಮತ್ತು ಮಾನವ ಸಂಪನ್ಮೂಲ), ಕವಿಪ್ರನಿನಿ.

   www.kptcl.com/eprasarana for information of:

6. ಎಲ್ಲಾ ಅಧೀಕ್ಷಕ ಇಂಜಿನಿಯರ್ (ವಿ)/ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
7. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್ (ವಿ)/ಉಪ ಲೆಕ್ಕನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
8. ಎಲ್ಲಾ ಅಧಿಕಾರಿಗಳು, ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

<u>ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:-</u>

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ (ನೋಂದಣಿ ಸಂಖ್ಯೆ: 659), ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
2. ಶ್ರೀ.ಟಿ.ಎಂ.ಶಿವಪ್ರಕಾಶ್, ಅಧ್ಯಕ್ಷರು, ಕವಿಮಂ ಇಂಜಿನಿಯರ್‌ಗಳ ಸಂಘ, ಬೆಂಗಳೂರು, ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ(ನೋಂದಣಿ ಸಂಖ್ಯೆ: 659), ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ(ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಡಿಪ್ಲೋಮಾ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂ ಪ.ಜಾ/ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು.
9. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಪಿಂಚಣಿದಾರರ ಸಂಘ, ಕಾವೇರಿಭವನ, ಬೆಂಗಳೂರು.